# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಡಾ|| ಯತೀಂದ್ರ. ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1114 |
| ಉತ್ತರಿಸಬೇಕಾದ ದಿನಾಂಕ | 18.12.2024 |
| ಉತ್ತರಿಸಬೇಕಾದ ಸಚಿವರು | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ರಾಜ್ಯದಲ್ಲಿ ಅಭಿವೃದ್ಧಿ ಪಡಿಸುತ್ತಿರುವ ಎಲ್ಲಾ ರಿಯಲ್ ಎಸ್ಟೇಟ್ ಪ್ರಾಜೆಕ್ಟ್‌ಗಳು ರೇರಾ ಅಡಿ ನೋಂದಣಿಯಾಗಿವೆಯೇ; ಇಲ್ಲವಾದಲ್ಲಿ ಇನ್ನು ಎಷ್ಟು ಪ್ರಾಜೆಕ್ಟ್‌ಗಳು ನೋಂದಣಿಯಾಗಲು ಬಾಕಿ ಇವೆ; (ಈ ಕುರಿತು ರಿಯಲ್ ಎಸ್ಟೇಟ್ ಡೆವಲಪರ್/ಬಿಲ್ಡರ್‌ಗಳ ಮೇಲೆ ಕೈಗೊಂಡ ಕ್ರಮಗಳೇನು; (ವಿವರ ಒದಗಿಸುವುದು) | ರಾಜ್ಯದಲ್ಲಿ ಹಲವಾರು ಯೋಜನಾ / ಅಭಿವೃದ್ಧಿ ಪ್ರಾಧಿಕಾರ ಮತ್ತು ಸ್ಥಳೀಯ ಸಂಸ್ಥೆಗಳು ರಿಯಲ್ ಎಸ್ಟೇಟ್ ಯೋಜನೆಗಳಿಗೆ ಅನುಮೋದನೆ ನೀಡುತ್ತಿದ್ದು, ಅನುಮೋದನೆ ಪಡೆದ ಎಲ್ಲಾ ಯೋಜನೆಗಳು ರೇರಾ ಪ್ರಾಧಿಕಾರದಲ್ಲಿ ನೋಂದಣಿ ಯಾಗುತ್ತಿರುವುದಿಲ್ಲ.<br><br>ಯೋಜನಾ / ಅಭಿವೃದ್ಧಿ ಪ್ರಾಧಿಕಾರ ಮತ್ತು ಸ್ಥಳೀಯ ಸಂಸ್ಥೆಗಳು ರಿಯಲ್ ಎಸ್ಟೇಟ್ ಯೋಜನೆಗಳಿಗೆ ಅನುಮೋದನೆ ನೀಡಲಾದ ವಿವರಗಳು ರೇರಾ ಪ್ರಾಧಿಕಾರದಲ್ಲಿ ಲಭ್ಯವಿರುವುದಿಲ್ಲ.<br><br>ರೇರಾ ಪ್ರಾಧಿಕಾರದಲ್ಲಿ ಸ್ವೀಕೃತವಾಗಿರುವ ದೂರುಗಳ ಆಧಾರದ ಮೇರೆಗೆ ಸುಮಾರು 1050 ಯೋಜನೆಗಳು ನೋಂದಣಿಯಾಗದಿರುವುದು ರೇರಾ ಪ್ರಾಧಿಕಾರದ ಗಮನಕ್ಕೆ ಬಂದಿದ್ದು, ಸಂಬಂಧಪಟ್ಟವರಿಗೆ ನೋಟೀಸ್ ಜಾರಿಗೊಳಿಸಲಾಗುತ್ತಿದೆ. |
| ಆ) | ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ರೇರಾ) ಅಡಿ ಎಷ್ಟು ದೂರುಗಳು ದಾಖಲಾಗಿವೆ; ಅವುಗಳಲ್ಲಿ ಎಷ್ಟು ದೂರುಗಳನ್ನು ವಿಲೇ ಮಾಡಲಾಗಿದೆ? (ವಿವರ ಒದಗಿಸುವುದು) | ಪ್ರಸ್ತುತ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ 10,938 ದೂರುಗಳು ದಾಖಲಾಗಿದ್ದು, ಈ ಪೈಕಿ 7,633 ಪ್ರಕರಣಗಳನ್ನು ವಿಲೇ ಮಾಡಲಾಗಿರುತ್ತದೆ. |

ಸಂಖ್ಯೆ: ವಇ 245 ರೇರಾ 2024]

B. Zameer

(ಬಿ. ಝಡ್. ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು